148ನೇ ಅಧಿವೇಶನ
ನಿ-72
ಕ್ರ-65 - ರಂಪ್ಯೂಟರ್

**ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಬಸವರಾಜ ಹೊರಟ್ಟಿ ಇವರ ನಿಯಮ 72ರಡಿ ಗಮನ ಸೆಳೆಯುವ ಸೂಚನೆಗೆ ಉತ್ತರಿಸುವ ಬಗ್ಗೆ.**

**ವಿಷಯ:**

ದಿನಾಂಕ.16.11.2022 ರ ವಿಜಯ ಕರ್ನಾಟಕ ದಿನಪತ್ರಿಕೆಯ ಪುಟ 10 ರಲ್ಲಿ ಪ್ರಕಟವಾಗಿರುವ ಫೇಲಾದವರಿಗೆ ಮತ್ತೆ ಪರೀಕ್ಷೆ ಬರೆಯಲು ಅವಕಾಶ ಎಂಬ ಶೀರ್ಷಿಕೆಯಡಿ ಸರ್ಕಾರ ಮತ್ತು ಬೆಂಗಳೂರು ವಿಶ್ವವಿದ್ಯಾಲಯವು ತೆಗೆದುಕೊಂಡಿರುವ ಈ ನಿರ್ಧಾರ ನಿಜಕ್ಕೂ ಶ್ಲಾಘನೀಯವಾದದ್ದು. ಹಲವಾರು ಕಾರಣಗಳಿಂದ ನಾಗರೀಕರು/ವಿದ್ಯಾರ್ಥಿಗಳು ಕೋರ್ಸು ಮುಗಿಸಿದ್ದು ಪದವಿ ಪಡೆಯಲು ಸಾಧ್ಯವಾಗಿರುವುದಿಲ್ಲ. ಇಂತಹದನ್ನು ಗುರುತಿಸಿ ಅವಕಾಶ ನೀಡಿರುವ ಕ್ರಮ ಉತ್ತಮವಾದದ್ದು.

ಬೆಂಗಳೂರು ವಿಶ್ವವಿದ್ಯಾಲಯ (ಜ್ಞಾನಭಾರತಿ), ವ್ಯಾಪ್ತಿಯಲ್ಲಿ ಬರುವ ಕಾನೂನು ಕಾಲೇಜುಗಳಲ್ಲಿ ಈ ಹಿಂದೆ 2000 ರಿಂದ ದಾಖಲಾತಿ ಹೊಂದಿ ಕೋರ್ಸು ಮುಗಿಸಿ ಪದವಿ ಪಡೆಯಲು ಸಾಧ್ಯವಾಗದ ಕಾನೂನು ವಿದ್ಯಾರ್ಥಿಗಳಿಗೆ ಈ ಹಿಂದೆ ಸರ್ಕಾರವು ನಿಯಮ 72 ರಲ್ಲಿ ನೀಡಿದ ಭರವಸೆಯಂತೆ ಈ ಸಾಲಿನ ಜುಲೈ ಮತ್ತು ಆಗಸ್ಟನಲ್ಲಿ ಒಂದು ಬಾರಿಯ ಕ್ರಮವಾಗಿ ಪರೀಕ್ಷೆ ನೀಡಿರುವುದು ಅಭಿನಂದನೀಯವಾಗಿರುತ್ತದೆ. "ಈ ಪರೀಕ್ಷೆಯಲ್ಲಿ ಹಾಜರಾಗಿ ಒಂದು ಅಥವಾ ಎರಡು ಮೂರು ವಿಷಯಗಳು ಬಾಕಿ ಇರುವ ವಿದ್ಯಾರ್ಥಿಗಳಿಗೆ ಪೂರಕ ಪರೀಕ್ಷೆಯನ್ನು ನಡೆಸುವುದರೊಂದಿಗೆ ಈ ಅವಕಾಶ ಸಾರ್ಥಕವಾಗುವಂತೆ" ನೋಡಿಕೊಳ್ಳಬೇಕೆಂದು ಸರ್ಕಾರ ಮತ್ತು ವಿಶ್ವವಿದ್ಯಾಲಯವನ್ನು ಒತ್ತಾಯಿಸುತ್ತಾ ಮತ್ತೊಮ್ಮೆ ಸರ್ಕಾರ ಹಾಗೂ ಬೆಂಗಳೂರು ವಿಶ್ವವಿದ್ಯಾಲಯ (ಜ್ಞಾನಭಾರತಿ) ನ್ನು ಅಭಿನಂದಿಸುತ್ತೇನೆ.

ಈ ರೀತಿಯ ಅವಕಾಶವನ್ನು ಎಲ್ಲಾ ವಿಶ್ವವಿದ್ಯಾಲಯಗಳು ನಾಗರೀಕರು/ವಿದ್ಯಾರ್ಥಿಗಳಿಗೆ ನೀಡುವಂತೆ ಸರ್ಕಾರ ಆದೇಶ ಹೊರಡಿಸಬೇಕೆಂದು ಮಾನ್ಯ ಉನ್ನತ ಶಿಕ್ಷಣ ಸಚಿವರ ಗಮನ ಸೆಳೆಯ ಬಯಸುತ್ತೇನೆ.

**ಉತ್ತರ:**

ಬೆಂಗಳೂರು ವಿಶ್ವವಿದ್ಯಾಲಯದಲ್ಲಿ 2000ನೇ ಸಾಲಿನಲ್ಲಿ ದಾಖಲಾತಿ ಹೊಂದಿ ಕಾನೂನು ಪದವಿ ಪೂರ್ಣಗೊಳಿಸಲು ಸಾಧ್ಯವಾಗದೇ ಇರುವ ಕಾನೂನು ಪದವಿ ವಿದ್ಯಾರ್ಥಿಗಳಿಗೆ ದಿನಾಂಕ: 17-11-2020ರ ವಿದ್ಯಾವಿಷಯಕ ಪರಿಷತ್ತಿನ ಸಭೆಯ ನಿರ್ಣಯದ ಅನುಸಾರ ದಿನಾಂಕ: 19-07-2022ರ ಪರೀಕ್ಷಾ ವೇಳಾಪಟ್ಟಿಯಂತೆ ಕಾನೂನು ಪದವಿ ಪರೀಕ್ಷೆಗಳನ್ನು ಒಂದು ಬಾರಿ ಕ್ರಮವೆಂದು ಪರೀಕ್ಷೆ ನಡೆಸಲಾಗಿದೆ. ಈ ಪರೀಕ್ಷೆಯಲ್ಲಿ ಅನುತ್ತೀರ್ಣಗೊಂಡಿರುವ ವಿದ್ಯಾರ್ಥಿಗಳಿಗೆ ಪೂರಕ ಪರೀಕ್ಷೆಗಳನ್ನು ನಡೆಸಲು ಅವಕಾಶವಿರುವುದಿಲ್ಲ.

ಯುಜಿಸಿ ದಿನಾಂಕ:15.10.2015ರಲ್ಲಿ ಹೊರಡಿಸಿರುವ UGC Guidelines on Determination of a uniform span period within which a student may be allowed to qualify for a degree ಕುರಿತು ಈ ಕೆಳಕಂಡಂತೆ ತಿಳಿಸಲಾಗಿದೆ.

a) Time Span=N+2 years for the completion of programme. Where N stands for the normal or minimum duration prescribed for completion of the programme.
b) In exceptional circumstances a further extension of one more year may be granted. The exceptional circumstances be spelt out clearly by the relevant statutory body concerned of the University.
c) During the extended period the student shall be considered as a private candidate and also not be eligible for ranking.

ಆದುದರಿಂದ, ಯುಜಿಸಿಯು ದಿನಾಂಕ:15.10.2015ರಲ್ಲಿ ಹೊರಡಿಸಿರುವ ಮಾರ್ಗಸೂಚಿಯಲ್ಲಿ ಕಲ್ಪಿಸಿರುವ ಅವಕಾಶಕ್ಕಿಂತ ಹೆಚ್ಚಿನ ಅವಧಿಗೆ ಒಂದು ಅಥವಾ ಎರಡು - ಮೂರು ವಿಷಯಗಳು ಬಾಕಿ ಇರುವ ವಿದ್ಯಾರ್ಥಿಗಳಿಗೆ ಪೂರಕ ಪರೀಕ್ಷೆಯನ್ನು ಉನ್ನತ ಶಿಕ್ಷಣ ಇಲಾಖೆಯಡಿ ಬರುವ ಸಾರ್ವಜನಿಕ ವಿಶ್ವವಿದ್ಯಾಲಯಗಳಲ್ಲಿ ನಡೆಸಲು ಅವಕಾಶವಿರುವುದಿಲ್ಲ.

ಸಂಖ್ಯೆ: ಇಡಿ 342 ಯುಎನ್‌ಇ 2022

(ಡಾ: ಅಶ್ವಥ್ ನಾರಾಯಣ ಸಿ.ಎನ್)
ಉನ್ನತ ಶಿಕ್ಷಣ, ಐಟಿ ಬಿಟಿ, ವಿಜ್ಞಾನ ಮತ್ತು
ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಮತ್ತು ಜೀವನೋಪಾಯ
ಸಚಿವರು